**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ಆಯವ್ಯಯ ಲೆಕ್ಕಶೀರ್ಷಿಕೆ 2515-00-101-0-17(21)ರಡಿಯಲ್ಲಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಅಧೀನ ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ ಇವರ ಪತ್ರ ಸಂಖ್ಯೆ:ರಾಚುಆ/01/ಲೆಕ್ಕ/2020-21 ದಿನಾಂಕ:26-06-2020 ಹಾಗೂ 28-07-2020.
2. ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 02 ಟಿಎಫ್‌ಪಿ 2020, ದಿನಾಂಕ : 30-05-2020.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 198 ಜಿಪಸ 2020, ದಿನಾಂಕ:28-07-2020.

**ಪ್ರಸ್ತಾವನೆ:**

ದಾವಣಗೆರೆ ಜಿಲ್ಲೆ, ಹರಿಹರ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಎಂ. ಸೋಮಶೇಖರ್, ಪ್ರಥಮ ದರ್ಜೆ ಸಹಾಯಕರು ಇವರು ಯಕೃತ್ ಬದಲಾವಣೆ ಚಿಕಿತ್ಸೆಯನ್ನು ಅಪೋಲೋ ಆಸ್ಪತ್ರೆ, ಬೆಂಗಳೂರಿನಲ್ಲಿ ಪಡೆದಿದ್ದು, ಸದರಿ ಚಿಕಿತ್ಸೆ ಮೊತ್ತವನ್ನು ಹಾಲಿ ಒಟ್ಟು ರೂ.29,55,057/- ಗಳ ಖರ್ಚನ್ನು ಭರಿಸಿರುವ ಪ್ರಯುಕ್ತ, ಸದರಿ ಚಿಕಿತ್ಸೆ ಮೊತ್ತವನ್ನು ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಿ.ಜಿ.ಹೆಚ್.ಎಸ್ ದರಪಟ್ಟಿಯಂತೆ ಪರಿಶೀಲಿಸಿ ಸದರಿ ನೌಕರರ ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ರೂ.15,42,539/-(ಹದಿನೈದು ಲಕ್ಷದ ನಲವತ್ತೆರಡು ಸಾವಿರದ ಐದು ನೂರ ಮೂವತ್ತೊಂಭತ್ತು ರೂಪಾಯಿಗಳು ಮಾತ್ರ)ಗಳನ್ನು ಅರ್ಹ ಮೊತ್ತವೆಂದು ನಿಗಧಪಡಿಸಿ, ವೈದ್ಯಕೀಯ ವೆಚ್ಚ ಮರುಪಾವತಿಯ ಸಂಬಂಧ ಆಯವ್ಯಯ ಲೆಕ್ಕಶೀರ್ಷಿಕೆ 2515-00-101-0-17(021)ರಡಿಯಲ್ಲಿ ಅನುದಾನ ಬಿಡುಗಡೆ ಮಾಡುವಂತೆ ಕೋರಿ ಮೇಲೆ ಓದಲಾದ(1)ರ ದಿನಾಂಕ:26-06-2020 ಹಾಗೂ 28-07-2020ರ ಪತ್ರಗಳಲ್ಲಿ ಅಧೀನ ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ(2)ರ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 31 ವೆಚ್ಚ-6/2019, ದಿನಾಂಕ:30-05-2020ರಲ್ಲಿ 2020-21 ಸಾಲಿನ ಆಯವ್ಯಯ ಅಂದಾಜುಗಳನ್ನು ಪರಿಷ್ಕರಿಸಿ, ಆರ್ಥಿಕ ಇಲಾಖೆಯು ಹೊರಡಿಸಿರುವ ಅನಧಿಕೃತ ಟಿಪ್ಪಣಿಯನ್ವಯ ಲೆಕ್ಕ ಶೀರ್ಷಿಕೆ 2515-00-101-0-17ಕ್ಕೆ ನಿಗಧಿಪಡಿಸಲಾದ ಅನುದಾನ ರೂ.1098.00 ಲಕ್ಷಗಳ ಪೈಕಿ ಶೇಕಡಾ 50ರಷ್ಟು ಪರಿಷ್ಕೃತ ಆಯವ್ಯಯ ರೂ.549.00 ಲಕ್ಷಗಳನ್ನು ಮರು ನಿಗಧಿಪಡಿಸಿರುತ್ತದೆ. ಅದರಲ್ಲಿ, ಉಪಲೆಕ್ಕಶೀರ್ಷಿಕೆ:021(ವೈದ್ಯಕೀಯ ವೆಚ್ಚ ಮರುಪಾವತಿ)ಯಡಿಯಲ್ಲಿ ರೂ.15.00 ಲಕ್ಷಗಳನ್ನು ನಿಗಧಿಪಡಿಸಿರುತ್ತದೆ.

ಮೇಲೆ ಓದಲಾದ(3)ರ ದಿನಾಂಕ:28-07-2020ರ ಆದೇಶದಲ್ಲಿ 2020-21ನೇ ಸಾಲಿನಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ಲೆಕ್ಕ ಶೀರ್ಷಿಕೆ 2515-00-101-0-17ರಡಿ ಒದಗಿಸಿರುವ ಅನುದಾನದಲ್ಲಿ, ಉಪ ಲೆಕ್ಕಶೀರ್ಷಿಕೆ:021 (ವೈದ್ಯಕೀಯ ವೆಚ್ಚ ಮರುಪಾವತಿ)ಯಡಿಯಲ್ಲಿ ರೂ.3.75ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿರುತ್ತದೆ.

-2-

ಅಧೀನ ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 291 ಜಿಪಸ 2020, ಬೆಂಗಳೂರು, ದಿನಾಂಕ:29-10-2020**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2020-21ನೇ ಸಾಲಿನಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ಲೆಕ್ಕ ಶೀರ್ಷಿಕೆ 2515-00-101-0-17ರಡಿ ಒದಗಿಸಿರುವ ಅನುದಾನದಲ್ಲಿ ಉಪ ಲೆಕ್ಕಶೀರ್ಷಿಕೆ:021 (ವೈದ್ಯಕೀಯ ವೆಚ್ಚ ಮರುಪಾವತಿ)ಯಡಿಯಲ್ಲಿ ರೂ.3,75,000/-(ಮೂರು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಎರಡನೇ ಕಂತಾಗಿ ಬಿಡುಗಡೆಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಅಭಿಪ್ರಾಯ/ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 29/10/2020.
(ಬಿ.ನವೀನ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, 1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದ ಕಟ್ಟಡ (ಹಿಂಭಾಗ), ನಂ.8, ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು-560052.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
7. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು.
8. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.